ಇ) ಬೆಳಗಾಂ ಜಿಲ್ಲಾಧಿಕಾರಿಗಳು ಬೈಲಹೊಂಗಲ ಮತಕ್ಷೇತ್ರಕ್ಕೆ 12.22 ಲಕ್ಷ ರೂ. ಬಿಡುಗಡೆ ಮಾಡಿರುವರು. ಅದರಲ್ಲಿ 77,250.00ರೂ. ಹಣ ಖರ್ಚು ಮಾಡಲಾಗಿದೆ.

ಈ) ಬಂದಿಲ್ಲ.

ಉ) ಉದ್ಭವಿಸುವುದಿಲ್ಲ

ಚನ್ನಪಟ್ಟಣ ನಗರಕ್ಕೆ ಅಗ್ನಿಶಾಮಕ ಠಾಣೆ ಮಂಜೂರಾತಿ.

73 - ಶ್ರೀ.ಸಾದತ್ ಆಲಿಖಾನ್ (ಚನ್ನಪಟ್ಟಣ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1990ರಲ್ಲಿ ನಡೆದ ಕೋಮು ಗಲಭೆಗಳ ಸಮಯದಲ್ಲಿ ಹಿಂದಿನ ಮುಖ್ಯಮಂತ್ರಿಗಳು ಚನ್ನಪಟ್ಟಣಕ್ಕೆ ಭೇಟಿ ನೀಡಿದಾಗ, ಚನ್ನಪಟ್ಟಣದಲ್ಲಿ ಒಂದು ಅಗ್ನಿ ಶಾಮಕ ಠಾಣೆಯನ್ನು ಮಂಜೂರು ಮಾಡುವುದಾಗಿ ಭರವಸೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮೇಲಿನ ಪ್ರಸ್ತಾವನೆಯು ಸರ್ಕಾರದಲ್ಲಿ ಮೂರು ವರ್ಷಗಳಿಂದ ಬಾಕಿ ಉಳಿದಿರುವುದು ನಿಜವೇ?

ಇ) ಚನ್ನಪಟ್ಟಣ ಕೃಷಿ ಉತ್ಪನ್ನ ಮಾರುಕಟ್ಟೆಯ ಪ್ರಾಂಗಣದಲ್ಲಿ ಅಗ್ನಿಶಾಮಕ ಠಾಣೆಯನ್ನು ಕಟ್ಟಲು ಜಮೀನನ್ನು ಕಾಯ್ದಿರಿಸಿರುವುದು ನಿಜವೇ? ಹಾಗೂ ಇದನ್ನು ಹಿಂದಿನ ಅಗ್ನಿಶಾಕ ಇಲಾಖೆಯ ಡೈರೆಕ್ಟರ್ ಜನರಲ್ ರವರು ಒಪ್ಪಿದ್ದರೇ?

ಈ) ಇದನ್ನು ಯಾವಾಗ ಮಂಜೂರು ಮಾಡಲಾಗುವುದು ಮತ್ತು ಯಾವಾಗ ನಿರ್ಮಾಣ ಕೆಲಸವನ್ನು ತೆಗೆದುಕೊಳ್ಳಲಾಗುವುದು?

ಶ್ರೀ ಎಂ.ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಕೃಷಿ ಉತ್ಪನ್ನ ಮಾರುಕಟ್ಟೆಯು 24 ಗುಂಟೆ ಜಮೀನನ್ನು ನೀಡುವುದಾಗಿ ತಿಳಿಸಿತ್ತು. ಆದರೆ ಇದು ಅಗ್ನಿ ಶಾಮಕ ಠಾಣೆ ಸ್ಥಾಪನೆಗೆ ಸಾಕಾಗುವುದಿಲ್ಲ. ಮತ್ತು ಸೂಕ್ತವಾಗಿಲ್ಲ.

1991ರಲ್ಲಿ ಸರ್ಕಾರವು ಚನ್ನಪಟ್ಟಣ ಹಾಗೂ ರಾಮನಗರ ಎರಡು ನಗರಗಳಿಗೆ ಸೇವಾ ಸೌಲಭ್ಯ ಒದಗಿಸಲು ಅನುಕೂಲವಾಗುವಂತೆ ಒಂದು ಅಗ್ನಿ ಶಾಮಕ ಠಾಣೆಯನ್ನು ಮಂಜೂರು ಮಾಡಿದೆ. ಸದ್ಯದಲ್ಲಿ ಸದರಿ ಅಗ್ನಿಶಾಮಕ ಠಾಣೆಯು ಚಿನ್ನಪಟ್ಟಣದ ಪೊಲೀಸ್ ತರಬೇತಿ ಶಾಲೆಯಲ್ಲಿ ಒದಗಿಸಲಾದ ತಾತ್ಕಾಲಿಕ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದೆ. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ರಾಮನಗರದ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಎರಡು ಎಕರೆ ಜಮೀನನ್ನು ಒದಗಿಸಿದೆ. ಈ ಜಮೀನು ಅಗ್ನಿಶಾಮಕ ಠಾಣೆಯನ್ನು ಸ್ಥಾಪಿಸಲು ಸೂಕ್ತವೂ ಮತ್ತು ಸಾಕಷ್ಟಿದ್ದು, ಇದು ಚನ್ನಪಟ್ಟಣ ಮತ್ತು ರಾಮನಗರ ಎರಡೂ ಪಟ್ಟಣಗಳಿಗೆ ಸೇವಾ ಸೌಲಭ್ಯವನ್ನು ಒದಗಿಸುತ್ತದೆ.

ಚನ್ನಪಟ್ಟಣ ಟೌನ್ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಸೀಮೆಎಣ್ಣೆ ಅಭಾವ.

74 - ಶ್ರೀ ಸಾದತ್ ಆಲಿ ಖಾನ್, (ಚನ್ನಪಟ್ಟಣ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚನ್ನಪಟ್ಟಣದ ಟೌನ್ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಒಂದು ವರ್ಷದಿಂದ ಸೀಮೆಎಣ್ಣೆಯ ಅಭಾವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಅ) ಚನ್ನಪಟ್ಟಣ ಟೌನ್ ಮತ್ತು ಗ್ರಾಮಾಂತರ ಪ್ರದೇಶಗಳಿಗೆ ಸೀಮೆಎಣ್ಣೆ ವಿತರಣಾ ಪ್ರಮಾಣ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದಲ್ಲಿ ಬಾಕಿ ಇದೆಯೇ?

ಇ) ಈ ಬಗೆಗೆ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ಹಾಗೂ ಯಾವಾಗ ಇದನ್ನು ಹೆಚ್ಚಿಸಲಾಗುವುದು.?

ಶ್ರೀಮತಿ ಮನೋರಮಾ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ನಿಖರವಾದ ದೂರುಗಳಿಲ್ಲ.

ಆ) ಸೀಮೆಎಣ್ಣೆ ವಿತರಣಾ ಪ್ರಮಾಣವನ್ನು ಹೆಚ್ಚುವರಿ ಮಾಡಲು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದು ಇದರಲ್ಲಿ ಚನ್ನಪಟ್ಟಣ ತಾಲ್ಲೂಕು ಸೇರ್ಪಡೆಯಾಗಿದೆ.

ಇ) ರಾಜ್ಯದ ಹಂಚಿಕೆ ಪ್ರಮಾಣವನ್ನು ಹೆಚ್ಚಿಸಲು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಕೇಂದ್ರ ಸರ್ಕಾರವು ಇದನ್ನು ಪರಿಗಣಿಸಿದರೆ, ಜಿಲ್ಲೆಗಳ ಹಂಚಿಕೆ (ಚನ್ನಪಟ್ಟಣ ಟೌನ್ ಮತ್ತು ಗ್ರಾಮಾಂತರ ಸೇರಿ) ಪ್ರಮಾಣವನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು.

ಚನ್ನಪಟ್ಟಣದಲ್ಲಿ ನೂತನ ಬಸ್ ನಿಲ್ದಾಣ ನಿರ್ಮಾಣ

75 - ಶ್ರೀ ಸಾದತ್ ಅಲಿಖಾನ್ (ಚನ್ನಪಟ್ಟಣ) : ಮಾನ್ಯ ಸಾರಿಗೆ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚನ್ನಪಟ್ಟಣದಲ್ಲಿ ನೂತನ ಬಸ್ ನಿಲ್ದಾಣ ನಿರ್ಮಾಣ ಕಾರ್ಯವನ್ನು ಇಲ್ಲಿಯವರೆಗೂ ಪ್ರಾರಂಭಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ನಿರ್ಮಾಣ ಕಾರ್ಯವನ್ನು ಕೈಗೊಳ್ಳುವಲ್ಲಿ ಆಗಿರುವ ವಿಳಂಬಕ್ಕೆ ಕಾರಣಗಳೇನು?

ಇ) ನಿರ್ಮಾಣ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು (ನಿರ್ದಿಷ್ಟ ದಿನಾಂಕವನ್ನು ತಿಳಿಸುವುದು)?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು)

ಅ) ಹೌದು

ಆ) ಸಂಸ್ಥೆಯ ಆರ್ಥಿಕ ಮುಗ್ಗಟ್ಟಿನ ಪರಿಸ್ಥಿತಿಯಿಂದಾಗಿ ನಿರ್ಮಾಣ ಕಾರ್ಯವನ್ನು ಕೈಗೊಳ್ಳುವಲ್ಲಿ ವಿಳಂಬವಾಗಿರುತ್ತದೆ.

ಇ) ಸಂಸ್ಥೆಯ ಆರ್ಥಿಕ ಪರಿಸ್ಥಿತಿ ಸುಧಾರಿಸಿದಲ್ಲಿ ನಿರ್ಮಾಣ ಕಾರ್ಯವನ್ನು 1994-95ನೇ ಸಾಲಿನಲ್ಲಿ ಕೈಗೊಳ್ಳಲು ಪರಿಶೀಲಿಸಲಾಗುವುದು.

ಅಧ್ಯಕ್ಷರು : ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಶ್ರೀ ಎಂ.ವಿ. ವೆಂಕಟಪ್ಪ : ಕೊನೆಯಲ್ಲಿ ನನ್ನ ಪ್ರಶ್ನೆ ಇದೆ. ನೀವು ಪ್ರಶ್ನೋತ್ತರ ವೇಳೆ ಮುಗಿಯಿತು ಎಂದು ಹೇಳುತ್ತಿದ್ದೀರಿ. ಇದು ನಿಮಗೆ ನ್ಯಾಯ ಅಲ್ಲ.

ಅಧ್ಯಕ್ಷರು : ನೀವು ಕುಳಿತುಕೊಳ್ಳಿ.

ಶ್ರೀ ಆರ್.ವಿ. ದೇಶಪಾಂಡೆ : ಒಂದು ಗಂಟೆಯಾಯಿತು. ಪ್ರಶ್ನೋತ್ತರ ವೇಳೆ ಮುಗಿಯಿತು ಎಂದು ತಾವು ಹೇಳಿದ್ದನ್ನು ನಾನು ಒಪ್ಪಿಕೊಳ್ಳುತ್ತೇನೆ. ಈಗ ಕಳೆದಸಲ ಎರಡು ಸೆಷನ್‌ಗಳು ನಡೆದಾಗ, ಯಾವ ಪ್ರಶ್ನೆಯನ್ನೂ ತೆಗೆದುಕೊಳ್ಳಲಿಕ್ಕೆ ಆಗಲಿಲ್ಲ. ಅದು ಯಾವ ಕಾರಣದಿಂದ ಆಯಿತು. ಅದಕ್ಕೆ ಯಾರು ಅಡ್ಡಿ ಬಂದರು. ರೂಲಿಂಗ್ ಪಾರ್ಟಿಯವರು ಅಡ್ಡಿ ಮಾಡಿದರು ಎಂಬುದು ತಮಗೆ ಗೊತ್ತು. ಇವತ್ತು ಬಹಳ ಮುಖ್ಯವಾದ ಪ್ರಶ್ನೆ ಇದೆ. ಆ ಪ್ರಶ್ನೆ ಕೊನೆಗೆ ಬಂದರೆ ಅವರದ್ದೇನು ತಪ್ಪು?